21

ಇಲಾಖೆ / ವಿಷಯ : DEPARTMENT / SUBJECT: ಸಂಸತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 18/3/21

# ಎಪಿಕ್‌ಗೆ ಆಧಾರ್ ಲಿಂಕ್ ಪರಿಶೀಲನೆಯಲ್ಲಿ: ಕೇಂದ್ರ

ಉ.ವಾ 18/3/21



**ನವದೆಹಲಿ:** ಮತದಾರರ ಗುರುತಿನ ಚೀಟಿ (ಎಪಿಕ್) ಗೆ ಆಧಾರ್ ಲಿಂಕ್ ಮಾಡಬೇಕು ಎನ್ನುವ ಚುನಾವಣಾ ಆಯೋಗದ ಪ್ರಸ್ತಾಪ ಪರಿಶೀಲನೆಯಲ್ಲಿ ಇದೆ ಎಂದಿದೆ ಕೇಂದ್ರ ಸರ್ಕಾರ. ವಿವಿಧ ಸ್ಥಳಗಳಲ್ಲಿ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಂಡು ಗುರುತಿನ ಚೀಟಿ ಪಡೆಯುವುದನ್ನು ತಪ್ಪಿಸಲು ಚುನಾವಣಾ ಆಯೋಗ ಆಧಾರ್ ಅನ್ನು ಗುರುತಿನ ಚೀಟಿಗೆ ಲಿಂಕ್ ಮಾಡುವ ಬಗ್ಗೆ ಪ್ರಸ್ತಾಪ ಮಾಡಿತ್ತು. ಅದನ್ನು ಗಂಭೀರವಾಗಿಯೇ ಪರಿಶೀಲಿಸಲಾಗುತ್ತಿದೆ ಎಂದು ಕೇಂದ್ರ ಕಾನೂನು ಸಚಿವ ರವಿಶಂಕರ ಪ್ರಸಾದ್ ಲೋಕಸಭೆಗೆ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಮತದಾರರ ಪಟ್ಟಿ ಸುರಕ್ಷಿತವಾಗಿ ಇರಲು ಆಯೋಗ ಹಲವು ಕ್ರಮಗಳನ್ನು ಕೈಗೊಂಡಿದೆ. ಮತದಾರರ ಪಟ್ಟಿಯಲ್ಲಿರುವವರ ಹೆಸರುಗಳನ್ನು ಖಚಿತಪಡಿಸಿಕೊಳ್ಳಲು ಮಾತ್ರ ಆಧಾರ್ ಬಳಕೆ ಮಾಡಲಾಗುತ್ತದೆ. ಮತದಾರರ ವಿವರಗಳ ಅಂಶಗಳನ್ನು ಆಧಾರ್ ವ್ಯವಸ್ಥೆ ಜತೆಗೆ ವಿಲೀನ ಮಾಡಲಾಗುವುದಿಲ್ಲ ಎಂದಿದ್ದಾರೆ ಸಚಿವ ಪ್ರಸಾದ್. 2019ರ ಆಗಸ್ಟ್‌ನಲ್ಲಿ ಚುನಾವಣಾ ಆಯೋಗ ಈ ಬಗ್ಗೆ ಪ್ರಸ್ತಾಪ ಸಲ್ಲಿಸಿತ್ತು.